# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ 21, ಹೆಬ್ಬಾಳ, ಬೆಂಗಳೂರು-24

ಸಂಖ್ಯೆ: ಸ.ಅ/ವಾ-21/ಪಿ.ಆರ್/23/2022-23 ದಿನಾಂಕ:23-05-2022

## ::ವಾರ್ಡ್ ಸಮಿತಿ ಸಭೆಯ ನಡವಳಿಗಳು::

ವಿಷಯ:- ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ:ಬಿ12(5)ಪಿ.ಆರ್/35/2020-21 ದಿನಾಂಕ: 21-09-2020. ರವರ ಆದೇಶದಂತೆ ದಿನಾಂಕ: 21-05-2022 ರಂದು ವಾರ್ಡ್ ನಂ:21 ಹೆಬ್ಬಾಳದ, ವಾರ್ಡ್ ಸಮಿತಿ ಸಭೆಯ ನಡವಳಿಗಳು.

## :: ಸಭೆಗೆ ಹಾಜರಾಗಿದ್ದವರ ವಿವರಗಳು ::

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ |
|---|---|---|
| 1. | ಶ್ರೀ.ಎಂ.ವಿಘ್ನೇಶ್ವರ | ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 2. | ಶ್ರೀ. ಶ್ರೇಯಸ್ ಎಂ.ಎಸ್ | ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು ವಾಡ್ ನಂ. 21 |
| 3. | ಶ್ರೀ. ಮುಖೇಶ್ ಬಿರದಾರ್ | ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ-33 |
| 4. | ಶ್ರೀ.ಮೊಹಮ್ಮದ್ ಅತೀಕ್ | ಸಹಾಯಕ ಅಭಿಯಂತರರು (ಬೆಸ್ಕಾಂ) |
| 5. | ಶ್ರೀ. ರಾಜಕುಮಾರ್ | ಕಿರಿಯ ಅಭಿಯಂತರರು (ಬೆಸ್ಕಾಂ) |
| 6. | ಶ್ರೀ ವಿವೇಕ್ | ಕಿರಿಯ ಆರೋಗ್ಯ ಪರಿವೀಕ್ಷಕರು |
| 7. | ಶ್ರೀ. ರಾಮಣ್ಣ | ಕಂದಾಯ ನೀರಿಕ್ಷಕರು |
| 8. | ಶ್ರೀ. ಈರಪ್ಪ ಬಡಿಗಾರ್ | ಹೆಬ್ಬಾಳ ಸಂಚಾರಿ ಪೊಲೀಸ್ |
| 9. | ಶ್ರೀ.ಜಿ.ಸ್ವಾಮಿ | ವರ್ಕ್ ಇನ್ಸ್‌ಪೆಕ್ಟರ್ (ಬಿ.ಡಬ್ಲ್ಯೂ.ಎಸ್.ಎಸ್.ಬಿ) |
| 10. | ಶ್ರೀಮತಿ.ಹೇಮಾ | ಮೀಟರ್ ರೀಡರ್ (ಬಿ.ಡಬ್ಲ್ಯೂ.ಎಸ್.ಎಸ್.ಬಿ) |
| 11. | ಶ್ರೀ. ಬಸವರಾಜ | ಬಿ.ಬಿ.ಎಂ.ಪಿ ಮಾರ್ಷಲ್ (ವಾರ್ಡ್ ಸಂಖ್ಯೆ-21) |
| 12. | ಶ್ರೀ ಕ್ಯಾಪ್ಟನ್ ರಾಮಚಂದ್ರ | ಅಧ್ಯಕ್ಷರು, ಸ್ಥಳೀಯ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘ |
| 13. | ಶ್ರೀ. ಸೀನಪ್ಪ | ಅಧ್ಯಕ್ಷರು 1ನೇ ಬ್ಲಾಕ್ ಆನಂದ ನಗರ |
| 14. | ಶ್ರೀ. ಪ್ರಕಾಶ್ ಎಂ.ಎನ್ | ಕಾರ್ಯದರ್ಶಿಗಳು, ಸ್ಥಳೀಯ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘ, ಆನಂದ ನಗರ, 1ನೇ ಬ್ಲಾಕ್. |
| 15. | ಶ್ರೀ. ವೀರಶೇಖರ ಸ್ವಾಮಿ | ಕಾರ್ಯದರ್ಶಿ, ಸ್ಥಳೀಯ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘ, ಆನಂದ ನಗರ, |
| 16. | ಶ್ರೀ. ಚಂದ್ರಮೋಹನ್ | ಸ್ಥಳೀಯ ನಿವಾಸಿ |
| 17. | ಶ್ರೀ. ಅರುಣ್.ಎಸ್.ಕಾರಂತ್ | ಸ್ಥಳೀಯ ನಿವಾಸಿ |
| 18. | ಶ್ರೀ. ಸಂಜಯ್ ಎನ್ | ಸ್ಥಳೀಯ ನಿವಾಸಿ |
| 19. | ಶ್ರೀ. ಮುರಳಿಧರ್.ಆರ್ | ಸ್ಥಳೀಯ ನಿವಾಸಿ |
| 20. | ಶ್ರೀ. ವಿಶ್ವನಾಥ್ ರಾವ್ | ಸ್ಥಳೀಯ ನಿವಾಸಿ |

ವಾರ್ಡ್ ಸಮಿತಿಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳಾದ, ಶ್ರೀ. ಎಂ. ವಿಘ್ನೇಶ್ವರ್ ಮತ್ತು ವಾರ್ಡ್ ಕಾರ್ಯದರ್ಶಿಗಳಾದ ಶ್ರೀ ಶ್ರೇಯಸ್.ಎಂ.ಎಸ್ ರವರು ಸಭೆಗೆ ಹಾಜರಾಗಿದ್ದ ಎಲ್ಲರಿಗೂ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ವಾರ್ಡ್ ಕಮಿಟಿ ಸಭೆಯಲ್ಲಿ ಚರ್ಚಿಸಬೇಕಾದ ಅಜೆಂಡ ವಿಷಯಗಳ ಬಗ್ಗೆ ತಿಳಿಸಿದರು.

ಈ ಹಿಂದಿನ ಸಭೆಯ ಸಭಾ ನಡವಳಿಯನ್ನು ಚರ್ಚಿಸಿ ಬಾಕಿ ಇರುವ ಕುಂದು ಕೊರತೆಗಳನ್ನು ಪೂರೈಸಲು ಈ ಸಭೆಯಲ್ಲಿ ತಿಳಿಸಿರುತ್ತಾರೆ.

1. **ಕಾಮಗಾರಿ ವಿಭಾಗ:**

- ಆನಂದನಗರದ 2ನೇ ಮುಖ್ಯರಸ್ತೆಯಲ್ಲಿ ಮಿಸ್ಸಿಂಗ್ ಸ್ಲಾಬ್‌ಗಳನ್ನು ಪರಿಶೀಲಿಸಿ ಕ್ರಮ ಕೈಗೊಳ್ಳುವಂತೆ ವಾರ್ಡ್‌ನ ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು.
- ಆನಂದನಗರದ ಮುಖ್ಯರಸ್ತೆಯ ಹಾಗೂ ಸುತ್ತಮುತ್ತಲಿನ ಪ್ರದೇಶದ ಚರಂಡಿಗಳ ಹೂಳು ತೆಗೆಸಲು ವಾರ್ಡ್ ಅಭಿಯಂತರರಿಗೆ ಸೂಚಿಸಲಾಯಿತು.
- ಚೋಳನಗರ ವೃತ್ತದ ಹತ್ತಿರ ನಂದಿನ ಬೂತ್ ಬಳಿ ರೋಡ್ ಹಂಪ್ ಹಾಕಿಸಲು ವಾರ್ಡ್ ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು.
- ಆನಂದನಗರದ ಸುತ್ತಮುತ್ತಲಿನ ಪ್ರದೇಶಗಳಲ್ಲಿನ ರಸ್ತೆ ಗುಂಡಿಗಳನ್ನು ತಕ್ಷಣ ದುರಸ್ಥಿಪಡಿಸಲು ವಾರ್ಡ್‌ನ ಸಹಾಯಕ ಅಭಿಯಂತರರಿಗೆ ಸೂಕ್ತ ಕ್ರಮ ಕೈಗೊಳ್ಳಲು ಸೂಚಿಸಲಾಯಿತು.
- ಆನಂದನಗರ ಮುಖ್ಯರಸ್ತೆಯ ಪಾದಚಾರಿ ಮಾರ್ಗವನ್ನು ಪರಿಶೀಲಿಸಿ ದುರಸ್ಥಿಪಡಿಸಲು ವಾರ್ಡ್‌ನ ಸಹಾಯಕ ಅಭಿಯಂತರರಿಗೆ ಸೂಚಿಸಲಾಯಿತು.

2. **ಬಿ.ಡಬ್ಲ್ಯೂ.ಎಸ್.ಎಸ್.ಬಿ**

- ಆನಂದನಗರದ 5ನೇ ಮುಖ್ಯರಸ್ತೆಯಲ್ಲಿ ಸೀವೆಜ್ ಪೈಪ್ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳುವಂತೆ ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳಿಗೆ ಸೂಚಿಸಲಾಯಿತು.
- ವಾರ್ಡ್ ವ್ಯಾಪ್ತಿಯಲ್ಲಿ ಕುಡಿಯುವ ನೀರು ಸಮರ್ಪಕವಾಗಿ ಸರಬರಾಜು ಆಗುತ್ತಿಲ್ಲವೆಂದು ಸಾರ್ವಜನಿಕರು ದೂರನ್ನು ಸಲ್ಲಿಸಿರುತ್ತಾರೆ. ಆದ್ದರಿಂದ ವಾರ್ಡ್ ವ್ಯಾಪ್ತಿಯಲ್ಲಿ ಸಮರ್ಪಕವಾಗಿ ನೀರನ್ನು ಸರಬರಾಜು ಮಾಡಲು ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಸೂಚಿಸಲಾಯಿತು.

3. **ಅರಣ್ಯ ಇಲಾಖೆ:**

- ಆನಂದ ನಗರದ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಜೋತು ಬಿದ್ದಿರುವ ಮರದ ಕೊಂಬೆಗಳನ್ನು ಕತ್ತರಿಸಿ ತೆರವುಗೊಳಿಸಲು ಅರಣ್ಯ ಇಲಾಖೆ ಅಧಿಕಾರಿಗಳಿಗೆ ಪತ್ರ ಬರೆದು ಸಮಸ್ಯೆ ಬಗೆಹರಿಸಲು ತೀರ್ಮಾನಿಸಲಾಯಿತು.

4. **ಬೆಸ್ಕಾಂ ವಿಭಾಗ:**

- ವಾರ್ಡ್ ವ್ಯಾಪ್ತಿಯಲ್ಲಿ ಜೋತು ಬಿದ್ದಿರುವ ಓ.ಎಫ್.ಸಿ ಕೇಬಲ್‌ಗಳನ್ನು ತೆರವುಗೊಳಿಸಲು ಬೆಸ್ಕಾಂ ಅಧಿಕಾರಿಗಳಿಗೆ ಸೂಚಿಸಲಾಯಿತು.

5. **ಆರೋಗ್ಯ ಇಲಾಖೆ:**

- ವಾರ್ಡ್‌ನ ಕಿರಿಯ ಆರೋಗ್ಯ ಪರಿವೀಕ್ಷಕರ ಕೋರಿಕೆಯ ಮೇರೆಗೆ ಕಸ ವಿಲೇವಾರಿಗಾಗಿ ಖಾಲಿ ಇರುವ ಬಿ.ಎಂ.ಟಿ.ಸಿ ಜಾಗವನ್ನು ಬಿ.ಬಿ.ಎಂ.ಪಿಗೆ ಹಸ್ತಾಂತರಿಸುವಂತೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಸಭೆಯಲ್ಲಿ ಸೂಚಿಸಲಾಯಿತು.

6. **ಘನತ್ಯಾಜ್ಯ ಮತ್ತು ತೋಟಗಾರಿಕೆ ಇಲಾಖೆ:**

- ಆನಂದನಗರ ಮತ್ತು ವಾರ್ಡ್ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಉದ್ಯಾನವನಗಳನ್ನು ಸ್ವಚ್ಛಗೊಳಿಸುವಂತೆ ಕ್ರಮಕೈಗೊಳ್ಳಲು ಘನತ್ಯಾಜ್ಯ ಮತ್ತು ತೋಟಗಾರಿಕೆ ವಿಭಾಗದವರಿಗೆ ಸೂಚಿಸಲಾಯಿತು.

ಮೇಲ್ಕಂಡ ಸಮಸ್ಯೆಗಳು ಬಗ್ಗೆ ಸುದೀರ್ಘವಾಗಿ ಚರ್ಚಿಸಿ ನೋಡಲ್ ಅಧಿಕಾರಿ ರವರು ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ: 21, ಹೆಬ್ಬಾಳ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ನಂ: 21, ಹೆಬ್ಬಾಳ

**ಪ್ರತಿಯನ್ನು:**

1. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರ ಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಜಂಟಿ/ಅಪರ ಆಯುಕ್ತರು (ಪೂರ್ವ) ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
3. ಮಾನ್ಯ ಜಂಟಿ ಆಯುಕ್ತರು (ಆರೋಗ್ಯ/ಎಸ್‌ಡಬ್ಲ್ಯೂಎಂ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
4. ಉಪ ಆಯುಕ್ತರು (ಪೂರ್ವ), ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ